ದಿನಾಂಕ: 09.12.2025 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಅರ್ಜಿದಾರರ ಪರ ವಕೀಲರಿಂದ :**

ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ, ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.

ಪೊಲೀಸರು ಸಲ್ಲಿಸಿದ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ-1 ಎಂದು, ದೂರಿನ ದೃಢೀಕೃತ ನಕಲನ್ನು ನಿಪಿ-2 ಎಂದು, ಸ್ಥಳ ಮಹಜರ್ ನ ದೃಢೀಕೃತ ನಕಲನ್ನು ನಿಪಿ-3 ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು ನಿಪಿ-4 ಎಂದು, ಪಿ.ಎಂ.ವರದಿಯನ್ನು ನಿಪಿ-5 ಎಂದು, ಚಾರ್ಜ್ ಶೀಟ್ ನ ದೃಢೀಕೃತ ನಕಲನ್ನು ನಿಪಿ-6 ಎಂದು, ಆಧಾರ್ ಕಾರ್ಡಿನ ನೋಟರಿ ಪ್ರತಿಯನ್ನು ನಿಪಿ-7 ಎಂದು, ಪಾನ್ ಕಾರ್ಡಿನ ನೋಟರಿ ಪ್ರತಿಯನ್ನು ನಿಪಿ-8 ಎಂದು, ಬ್ಯಾಂಕ್ ಪಾಸ್ ಬುಕ್ಕಿನ ನೋಟರಿ ಪ್ರತಿಯನ್ನು ನಿಪಿ-9 ಎಂದು, ಹಸುವಿನ 9 ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-10 ಎಂದು, ಸಿ.ಡಿ.ಯನ್ನು ನಿಪಿ-11 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ಅರ್ಜಿಯನ್ನು ಪುರಸ್ಕರಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**2ನೇ ಎದುರುದಾರರ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**